(8ನೇ ಪುಟದಿಂದ)
ಕಾಲ್ದಾರಿಯ ತುದಿಯಲ್ಲಿ ಚಿಟ್ಟೆ ಪಾರ್ಕ್ ಇದೆ. ಕೆರೆಯ ದಡದಲ್ಲಿ ಬೆಳೆದು ನಿಂತ ಮರಗಳ ಹಿಂದೆ, ಪೊದೆಗಳ ಸನಿಹ ಕಾಲೇಜಿಗೆ ಬಂಕ್ ಮಾಡಿಯೋ, ಇನ್ನೆಲ್ಲಿಂದಲೋ ಬಂದ ಪ್ರೇಮಿಗಳು ಪಿಸುಗುಡುತ್ತಿರುತ್ತಾರೆ.

ಹಿಂದೆಲ್ಲಾ ಪ್ರೇಮಿಗಳಿಗೆ ಕುಕ್ಕರಹಳ್ಳಿ ಕೆರೆಯೇ ಗತಿ ಎನ್ನುವಂತಿತ್ತು. ಅಲ್ಲಿ ವಾಕಿಂಗ್ ಟ್ರ್ಯಾಕ್ ಆಗಿ, ಮಧ್ಯವಯಸ್ಸಿನ ಪಾದಯಾತ್ರಿಗಳ ಸಂಖ್ಯೆ ಹೆಚ್ಚಾದಂತೆಲ್ಲ ಯುವ ಪ್ರೇಮಿಗಳು ಕಾರಂಜಿಕೆರೆಯತ್ತ ವಲಸೆ ಬಂದಿದ್ದಾರೆ.

ಈ ಕಾರಂಜಿಕೆರೆ ಹಿಂದೆ ಹೀಗಿರಲಿಲ್ಲ. ನಗರದಲ್ಲಿರುವ ಇತರ ಕೆರೆಗಳಂತೆಯೇ ಇತ್ತು. ಸುಮಾರು 90 ಎಕರೆಗಿಂತಲೂ ಹೆಚ್ಚಿನ ಪ್ರದೇಶದಲ್ಲಿ ನೆಲೆ ನಿಂತು ಸುತ್ತ ಮುತ್ತಲಿನ ಹಳ್ಳಿಯ ರೈತರ ಭೂಮಿಗೆ ನೀರುಣಿಸುತ್ತಿತ್ತು. ಆದರೆ ನಗರ ಬೆಳೆದಂತೆಲ್ಲಾ ಸುತ್ತಮುತ್ತಲಿನ ಕೊಳಕು, ಹೂಳು ತುಂಬಿ ಕೆರೆ ಕಲ್ಮಶ ಹೆಚ್ಚಿತು. ಜನ ಕೆರೆ ಬಗ್ಗೆ ತಲೆ ಕೆಡಿಸಿಕೊಂಡಿರಲಿಲ್ಲ. ಹಾಗಾಗಿ ಕಾರಂಜಿಕೆರೆ ಬಹಳ ಸಮಯದವರೆಗೆ ಜನರ ಗಮನ ಸೆಳೆಯದೆ ತನ್ನ ಪಾಡಿಗೆ ತಾನು ಎಂಬಂತೆ ಇತ್ತು. ಕೆರೆಯ ಸುತ್ತಲೂ ಬೆಳೆದು ನಿಂತ ಮರಗಿಡ ಪೊದೆಗಳಲ್ಲಿ ದೂರದಿಂದ ಬಂದ ಹಕ್ಕಿಗಳು ಗೂಡು ಕಟ್ಟಿ ಸಂಸಾರ ಹೂಡುತ್ತಿದ್ದವು. ಗಣೇಶ ಚತುರ್ಥಿಯ ಸಂದರ್ಭದಲ್ಲಿ ಗಣಪತಿಯ ವಿಸರ್ಜನೆಗೆ ಇತ್ತ ಬಂದರೆ, ಉಳಿದಂತೆ ಹಳ್ಳಿಯ ರೈತರು ದನ ಮೇಯಿಸಲು ಬರುತ್ತಿದ್ದರು.

ಆದರೆ ತನ್ನದೇ ನಿಸರ್ಗ ಚೆಲುವನ್ನು ಮೈಗೂಡಿಸಿಕೊಂಡಿದ್ದ ಈ ಕೆರೆ 1967ರಲ್ಲಿ ಮೃಗಾಲಯ ಪ್ರಾಧಿಕಾರದ ವ್ಯಾಪ್ತಿಗೆ ಬಂತು. ಆಗಲೂ ಕೆರೆಯನ್ನು ಅಭಿವೃದ್ಧಿ ಗೊಳಿಸಿ ಒಂದು ವಿಹಾರ ತಾಣವನ್ನಾಗಿ ರೂಪುಗೊಳಿಸುವ ಐಡಿಯಾ ಯಾರಿಗೂ ಬಂದಿರಲಿಲ್ಲ. ಕೆಲವು ವರ್ಷಗಳ ಹಿಂದೆ ಕಾರಂಜಿಕೆರೆಯ ಬಳಿ ಸಾಕಷ್ಟು ಚಿಟ್ಟೆಗಳು ವಾಸ್ತವ್ಯ ಹೂಡಿದ್ದನ್ನು ಕಂಡು 'ಚಿಟ್ಟೆ ಪಾರ್ಕ್' ಸ್ಥಾಪನೆ ಮಾಡಲಾಯಿತು. ಚಿಟ್ಟೆಗಳನ್ನು ಆಕರ್ಷಿಸುವ, ವಿಶಿಷ್ಟ ವಾಸನೆಯ ಹೂಗಿಡಗಳನ್ನು ಬೆಳೆಸಲಾಯಿತು. ವಿಶ್ವವಿದ್ಯಾನಿಲಯದ ಸದಾನಂದ ಎಂಬವರು ಈ ಚಿಟ್ಟೆ ಪಾರ್ಕ್‌ಗೆ ಜೀವ ತುಂಬಿದರು. ಹಾಗಿದ್ದೂ ಚಿಟ್ಟೆ ಪಾರ್ಕ್ ಈ ಕೆರೆಗೆ ಖ್ಯಾತಿಯನ್ನೇನೂ ತಂದುಕೊಡಲಿಲ್ಲ. ಈ ಕೆರೆಗೆ ಬಂದ ಬಹಳಷ್ಟು ಜನ ಈಗಲೂ ಚಿಟ್ಟೆಪಾರ್ಕ್ ಇರುವ ಇನ್ನೊಂದು ತುದಿಯವರೆಗೆ ನಡೆದು ಹೋಗುವುದೂ ಇಲ್ಲ!

ಕಲುಷಿತ ನೀರು, ಹೂಳು ತುಂಬಿ ಗಬ್ಬೆದ್ದು ನಾರುತ್ತಿದ್ದ ಕೆರೆಗೆ ಮೃಗಾಲಯ ಪ್ರಾಧಿಕಾರ ಮರುಹುಟ್ಟು ನೀಡಿತು. ಪ್ರಾಧಿಕಾರದ ಆಗಿನ ಕಾರ್ಯನಿರ್ವಾಹಕ ನಿರ್ದೇಶಕರಾದ ಕುಮಾರ್ ಪುಷ್ಕರ್ ಹಾಗೂ ಮನೋಜ್ ಕುಮಾರ್ ಅವರು ಕಾರಂಜಿಕೆರೆಯ ಅಭಿವೃದ್ಧಿಗೆ ಟೊಂಕಕಟ್ಟಿ ನಿಂತರು. ಕೆರೆಯ ತುಂಬಾ ತುಂಬಿದ್ದ ಹೂಳು ಹೊರಬಂತು. ಕೆರೆಗೆ ಬರುವ ಕೊಳಚೆ ನೀರನ್ನು ತಪ್ಪಿಸಲು ಸಾಧ್ಯವಾಗದ ಕಾರಣ ಅದನ್ನು ಇಂಗುಗುಂಡಿಯ ಮೂಲಕ ಇಂಗಿಸಿ, ತಿಳಿನೀರು ಮಾತ್ರ ಕೆರೆಯತ್ತ ಹರಿಯುವಂತೆ ಮಾಡಲಾಯಿತು. ಕೆರೆಗಳ ಮಧ್ಯೆ ಕೃತಕ ದ್ವೀಪಗಳನ್ನು ನಿರ್ಮಿಸಿ, ಅಲ್ಲಿ ಮರ ಬೆಳೆಸಿ ವಲಸೆ ಬರುವ ಹಕ್ಕಿಗಳಿಗೆ ನೆಲೆ ಕಲ್ಪಿಸಿಕೊಟ್ಟರು. ಕೆರೆಯ ನೀರಲ್ಲಿ ಸವಾರಿ ಮಾಡಲು ಬರುವವರಿಗೆ ದೋಣಿ ವ್ಯವಸ್ಥೆ ಮಾಡಿದರು. ಕೆರೆಯ ದಂಡೆಯಲ್ಲಿ ಸುಂದರ ಮರಗಿಡಗಳನ್ನು ಬೆಳೆಸಿದರು. ಓಡಾಡಲು ಅನುಕೂಲವಾಗುವಂತೆ ಕಾಲುದಾರಿಗಳನ್ನು ನಿರ್ಮಿಸಿದರು. ಕೆರೆಯ ಸುತ್ತಲೂ ಏರಿ ನಿರ್ಮಿಸಿ ಸುಂದರವಾದ ಪ್ರವೇಶ ದ್ವಾರವನ್ನು ನಿರ್ಮಿಸಲಾಯಿತು. ಹೀಗೆ ನವೀಕರಣಗೊಂಡ ಕೆರೆಗೆ ಕಾರಂಜಿ ಪ್ರಕೃತಿ ಉದ್ಯಾನವನ ಎಂಬ ಹೆಸರನ್ನಿಟ್ಟು 2004 ಜನವರಿ 25ರಂದು ಪ್ರವಾಸಿಗರ ವೀಕ್ಷಣೆಗೆ ತೆರೆಯಲಾಯಿತು. ಅಲ್ಲಿಂದ ಇಲ್ಲಿಯ ತನಕ ಲಕ್ಷಾಂತರ ಪ್ರವಾಸಿಗರನ್ನು ಕಾರಂಜಿ ಕೆರೆ ತನ್ನೆಡೆಗೆ ಸೆಳೆಯುತ್ತಿದೆ.

ಈಗ ಕಾರಂಜಿಕೆರೆಯಲ್ಲಿ ಮೀನು, ಮೊಸಳೆಯಂತಹ ಜಲಚರಗಳು, ಬ್ಲೂಜೆ, ಪೇಂಟೆಡ್ ಸ್ಟಾರ್ಕ್, ವೈಟ್ ಐಬೀಸ್, ಕಾಜಾಣಗಳಂತಹ ಬಾನಾಡಿಗಳು ಬೀಡು ಬಿಟ್ಟಿವೆ. ಸುಮಾರು ಎಪ್ಪತ್ತು ಪ್ರಭೇದದ ಚಿಟ್ಟೆಗಳು ವಾಸ್ತವ್ಯ ಹೂಡಿವೆ. ಔಷಧಿವನ, ಶ್ರೀಗಂಧದ ಮರಗಳಿವೆ. ಪಕ್ಷಿಗಳ ಹಾರಾಟವನ್ನು ವೀಕ್ಷಿಸಲೆಂದೇ 'ವಾಚ್‌ಟವರ್' ನಿರ್ಮಿಸಲಾಗಿದೆ. ಇಲ್ಲಿ ವರ್ಷಕ್ಕೊಮ್ಮೆ ನಡೆಯುವ ಫಲಪುಷ್ಪ ಪ್ರದರ್ಶನವೂ ಗಮನ ಸೆಳೆಯುವಂತಿದೆ.

ಇಷ್ಟೆಲ್ಲ ಆದ ಮೇಲೆ, ಪಕ್ಷಿ ಪ್ರೇಮಿಗಳು ಬರದೆ ಇರುತ್ತಾರಾ? ಪ್ರೇಮಿಗಳೂ ಸುಮ್ಮನಿರುತ್ತಾರಾ?



